



ಅರುಣ ಪಿ. ಭಟ್ಟ

## ವಾರಭವಿಷ್ಯ: 23.02.2023ರಿಂದ 01.03.2023ರವರೆಗೆ




ಮಕ್ಕಳ ಬಗ್ಗೆ ನಿಮ್ಮ ಗಮನ ಇರಲಿ. ಅವರ ಪರಿಸರವನ್ನು ಉತ್ತಮವಾಗಿಟ್ಟುಕೊಳ್ಳುವ ಮನಸ್ಥಿತಿ ರೂಪಿಸಬೇಕು. ಶ್ರಮದ ಕೆಲಸಗಳಿಂದ ಸಾರ್ಥಕತೆ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ: 25 ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನಿಮ್ಮ ಕೆಲಸದಲ್ಲಿ ಉತ್ತಮ ಫಲಿತಾಂಶ ಸಿಗಲಿದೆ. ನೀವು ಒಳ್ಳೆಯದು ಬಯಸಿದರೆ, ಅಪಹಾಸ್ಯ ಮಾಡಬಹುದು. ಇನ್ನೊಬ್ಬರಿಗೆ ಬುದ್ಧಿವಾದ ಹೇಳುವ ಮೊದಲು ವ್ಯಕ್ತಿ ಕೇಳುಗನಾಗಿದ್ದಾನೆಯೇ ಎಂಬುದನ್ನು ಅರಿತುಕೊಳ್ಳಿ. ವಾರವಿಡಿ ನಿಮ್ಮ ಮೇಲಧಿಕಾರಿಗಳ ಇಲ್ಲವೆ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ನಿಮ್ಮ ನಡತೆಯು ಹೆಚ್ಚು ಪ್ರಶಂಸೆಗೆ ಒಳಪಡುವುದು. ಶುಭದಿನ: 24. ಆದಿತ್ಯ ಹೃದಯ ಪಠಿಸಿರಿ.




ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ನಿಮ್ಮ ವಿನಯದ ಸ್ವಭಾವದಿಂದ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗೆ ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ವರ್ತನೆ ಬೇಸರ ತರಿಸಲಿದೆ. ಅವರನ್ನು ಸರಿಪಡಿಸಲು ಯೋಜನೆ ರೂಪಿಸಬೇಕಾದ ಅನಿವಾರ್ಯತೆ ಕಂಡುಬರುತ್ತದೆ. ಕೆಲಸದ ಸಮಯದಲ್ಲಿ ನೀವು ವಿಶೇಷ ಯಶಸ್ಸನ್ನು ಪಡೆಯುತ್ತೀರಿ. ಶುಭದಿನ: 24. ಸೌಂದರ್ಯ ಲಹರಿ ಪಠಿಸಿರಿ.




ಕೆಲಸದಲ್ಲಿ ಅನಗತ್ಯ ತೊಂದರೆ ಬರಬಹುದು. ಆದಷ್ಟು ಸಮಸ್ಯೆ ಪರಿಹಾರ ಹುಡುಕಿ ಮತ್ತು ಕೆಲವು ಕಾರ್ಯಗಳನ್ನು ನೀವೇ ಸ್ವತಃ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆಯಲ್ಲಿ ಹುಸಿಯಾಗಲಿದೆ. ಬರುವಂತ ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆ ಕಂಡುಬರುತ್ತದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಶುಭದಿನ: 26. ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾರಹಿತ ಹೂಡಿಕೆಗಳಿಂದ ನಷ್ಟ ಸಂಭವ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದ ಅತಿಶಯೋಕ್ತಿಯಾಗಿ ಕಾಣಬಹುದು. ಎಲ್ಲರ ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲಗಳು ಕಾಣಸಿಗಲಿದೆ. ಸಾಲದ ತೀರುವಳಿ ಮಾಡಿದಲ್ಲಿ ಅನುಕೂಲವಾಗುವುದು. ಶುಭದಿನ: 28. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ಹಿರಿಯರಿಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಗಳಿಕೆ ಇದ್ದರೂ ನಿಮ್ಮ ದುಡುಕುತನ ದೊಡ್ಡಪೆಟ್ಟು ಕೊಡಬಹುದು. ಮನಸಿನ ಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆಗಳು ಕಂಡುಬರುತ್ತದೆ. ಒಂದು ದೊಡ್ಡದಾದ ಯೋಜನೆಯೊಂದು ನಿಮ್ಮ ಬುದ್ಧಿ ಕೌಶಲ್ಯಕ್ಕೆ ಎದುರಾಗುವುದು. ಶುಭದಿನ: 27. ಹನುಮಾನ್ ಚಾಲಿಸ್ ಪಠಿಸಿರಿ.




ಕೆಲಸದಲ್ಲಿ ಹೆಚ್ಚಿನ ವಿಳಂಬದಿಂದ ನಿಮ್ಮ ಬಗ್ಗೆ ಹಲವು ಮಾತು ಕೇಳಿಬರಬಹುದು. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಕಂಡುಬರುತ್ತದೆ. ಟೀಕಿಸುವಂತಹ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ನಿಮ್ಮ ಸುತ್ತಮುತ್ತಲ ಜನರೇ ನಿಮ್ಮನ್ನು ಅಡ್ಡಹಾದಿಗೆ ಎಳೆಯುತ್ತಿರುವರು. ಶುಭದಿನ: 26. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗಳಿಗೆ ಹೋಗದಿರುವುದು ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನರಿದ್ದಾರೆ. ಸಂಗಾತಿಯ ಜೊತೆಗೆ ಖರೀದಿ ಪ್ರಕ್ರಿಯೆಗಳನ್ನು ಮಾಡಲು ಇಚ್ಛಿಸುತ್ತೀರಿ. ಅತಿಯಾದ ಮಾನಸಿಕ ಸಮಸ್ಯೆಯನ್ನು ದೂರವಿಡಿ. ಸಹೋದ್ಯೋಗಿಗಳ ಜತೆ ನಿಮ್ಮ ಯಶಸ್ಸಿನ ಗುಟ್ಟನ್ನು ಹಂಚಿಕೊಳ್ಳಬೇಡಿ. ಶುಭದಿನ: 26. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುತ್ತೀರಿ. ಆ ಮೂಲಕ ಹಲವು ಕಾರ್ಯಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ದೈಹಿಕ ನೋವುಗಳು ಕಾಡುತ್ತವೆ. ಸಂಬಂಧಿಕರ ಜತೆ ಅನಗತ್ಯವಾದ ವಾದ– ವಿವಾದಗಳು ಬೇಡ. ದೈಹಿಕ ಮತ್ತು ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಶುಭದಿನ: 25. ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಸುವುದು ಒಳ್ಳೆಯದು. ಕೃಷಿ ಚಟುವಟಿಕೆಗಳಲ್ಲಿ ಉತ್ತಮ ಬೆಳವಣಿಗೆ ಕಂಡುಬರುತ್ತದೆ. ಭೂಮಿಯ ವಿಷಯದಲ್ಲಿ ಉತ್ತಮ ವ್ಯವಹಾರ ನಡೆಸುವ ಸಾಧ್ಯತೆ ಇದೆ. ಅತ್ಯಂತ ಚುರುಕುತನದಿಂದ ಇದ್ದ ನೀವು ಆಲಸ್ಯತನ ತೋರುವುದರಿಂದ ಕೆಲಸಕ್ಕೆ ಹಿನ್ನಡೆ ಉಂಟಾಗುವುದು. ಸಂಬಂಧಗಳಲ್ಲಿ ಸಂತಸ ಇರುತ್ತದೆ. ಶುಭದಿನ: 24. ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಕುಟುಂಬದಲ್ಲಿ ಅನಿರೀಕ್ಷಿತ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿವಿನಿಂದ ಹೊರಬರಲು ಪ್ರಯತ್ನ ಮೆಚ್ಚುವಂತದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ಶುಭದಿನ: 24. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟಂಬಿಕ ಸಮಸ್ಯೆಗಳು ಸರಿಹೋಗಲಿವೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ. ಯಶಸ್ವಿದಾಯಕ ನಿರ್ಣಯಗಳಿಂದ ಸ್ಥಾನ ಗಟ್ಟಿಗೊಳಿಸಿಕೊಳ್ಳುವಿರಿ. ಹಣಕಾಸಿನ ವ್ಯವಹಾರದಲ್ಲಿ ನಿಮ್ಮ ನಿರ್ವಹಣೆ, ಸಾಮರ್ಥ್ಯ ನಿಮಗೆ ಹೆಚ್ಚಿನ ಪ್ರಶಂಸೆಯನ್ನು ತಂದುಕೊಡುವುದು. ಶುಭದಿನ: 27. ವಿಷ್ಣು ಸಹಸ್ರನಾಮ ಮಾಡಿರಿ.